ಹುಬ್ಬಳ್ಳಿ- ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ಕುರಿತು

270 (228) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್,(ಹುಬ್ಬಳ್ಳಿ):- ಮಾನ್ಯ ನಗರಾಭಿವೃದ್ಧಿ ಸಚಿವರು ಈಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ- ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ತಯಾರಿಸಲಾಗಿದೆಯೇ?

ಆ) ಸದರಿ ಮಾಸ್ಟರ್ ಪ್ಲ್ಯಾನ್ ಪ್ರಕಾರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಒಟ್ಟು ಎಷ್ಟು ಹಣ ಬೇಕಾಗುತ್ತದೆ?

ಇ) ಮಾಸ್ಟರ್ ಪ್ಲ್ಯಾನ್ ಸಿದ್ಧಗೊಳಿಸಿದ್ದಲ್ಲಿ ಪ್ರಗತಿಯ ಕಾರ್ಯ ಯಾವ ವರ್ಷದಿಂದ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :-

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಈ ಬಗ್ಗೆ ಅವಳಿ ನಗರಕ್ಕೆ ಸೀಮಿತವಾಗುವಂತೆ ವಿವಿಧ ಸೌಕರ್ಯಗಳ ಅಭಿವೃದ್ಧಿ ಸಲುವಾಗಿ ಬೆಂಗಳೂರು ಮಹಾನಗರದಲ್ಲಿ ರಚಿಸಿರುವಂತೆ ಈ ಅವಳಿ ನಗರಕ್ಕೆ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಒಂದು ಸಭೆ ನಡೆಸಲಾಗಿದೆ. ಈ ಬಗ್ಗೆ ದಿನಾಂಕ 5-10-2000ರಂದು ಒಂದು ಸಭೆಯನ್ನು ಜರುಗಿಸಲಾಗಿದೆ. ಇದು ಪ್ರಗತಿಯಲ್ಲಿದೆ.

ಹುಬ್ಬಳ್ಳಿ ಧಾರವಾಡ ನಗರ ಪಾಲಿಕೆ ಅಭಿವೃದ್ಧಿ

271 (229) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಸೈಯದ್ ಖಾನ್(ಹುಬ್ಬಳ್ಳಿ) :- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ- ಧಾರವಾಡವನ್ನು ಸರ್ಕಾರದ ಎರಡನೇ ಮಹಾನಗರವೆಂದು ಸರ್ಕಾರ ಗುರುತಿಸಿದೆಯೇ? ಹಾಗಾದಲ್ಲಿ ಬೆಳೆಯುತ್ತಿರುವ ಮಹಾನಗರದ ರಸ್ತೆಗಳು ಮತ್ತು ಒಳಚರಂಡಿ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗಿದೆಯೇ?

ಆ) ಬೆಂಗಳೂರು ಮಹಾನಗರ ಪಾಲಿಕೆಗೆ ಪ್ರತಿ ವರ್ಷ ನೀಡುತ್ತಿರುವ ಒಟ್ಟು ಅನುದಾನವೆಷ್ಟು? ಫ್ಲೈಓವರ್:ಸಿಂಗಾಪುರ ನಗರದಂತೆ ಪರಿವರ್ತಿಸಲು ನೀಡಿರುವ ಹಣವೆಷ್ಟು?

ಇ) ಹುಬ್ಬಳ್ಳಿ- ಧಾರವಾಡದ ಅಭಿವೃದ್ಧಿ ದೃಷ್ಟಿಯಿಂದ ಹೆಚ್ಚಿನ ಮಾರ್ಗ ಸಮೀಕ್ಷೆ, ಹೊರವಲಯದ ರಚನೆ ಮತ್ತು ವರ್ತುಲ ರಸ್ತೆಯ ಯೋಜನೆ ಹಾಗೂ ಎರಡು ನಗರಗಳ ಮಧ್ಯದಲ್ಲಿ ಜೋಡು ರಸ್ತೆ ನಿರ್ಮಿಸುವ ಯೋಜನೆ ಕೈಗೊಳ್ಳಲು ಸರ್ಕಾರ ತೀರ್ಮಾನಿಸಿದೆಯೇ?

ಶ್ರೀ ಬಿ.ಬಿ.ಚಿಮ್ಮನ ಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) ಹೌದು

ಆ) ಬೆಂಗಳೂರು ಮಹಾನಗರ ಪಾಲಿಕೆ ಫ್ಲೈ ಓವರ್: ಸಿಂಗಪುರ ನಗರದಂತೆ ಪರಿವರ್ತಿಸಲು ಯಾವುದೇ ಅನುದಾನ ನೀಡಿರುವುದಿಲ್ಲ.

ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆ ಮಾಡಲಾದ ಅನುದಾನದ ವಿವರ ಈ ಕೆಳಕಂಡಂತಿದೆ.

1999-2000 ರೂ. 93,05,97,989-00

2000-2001 ರೂ. 72, 12,01,785-00

16 ನೇ ಫೆಬ್ರವರಿ 2001 ರವರೆಗೆ

ಇ) ಎಲ್ಲಾ ಯೋಜನೆಗಳನ್ನೊಳಗೊಂಡ ಪರಿಷ್ಕೃತ ವ್ಯಾಪಕಾಭಿವೃದ್ಧಿ ಯೋಜನೆಯು (ಸಿ.ಡಿ.ಪಿ) ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿನ ಸಣ್ಣ ಕೈಗಾರಿಕೆಗಳ ಕುರಿತು

272 (231) ಶ್ರೀ ಹೊನ್ನಾವಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ):- ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷ ನೊಂದಾಣಿಯಾಗಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಧಾರವಾಡ ಜಿಲ್ಲೆಯಲ್ಲಿ ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷ ನೋಂದಾಣಿಯಾಗಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)?

ಇ) ಕಳೆದ ವರ್ಷ ಮತ್ತು ಪ್ರಸಕ್ತ ವರ್ಷ ಧಾರವಾಡ ಜಿಲ್ಲೆಯ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೊಂದಾಣಿಯಾದ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ಹಾಗೂ ಯಾವ ಯಾವ ಕೈಗಾರಿಕೆಗಳ ನೊಂದಾಣಿಯಾಗಿವೆ ಮತ್ತು ಪ್ರಾರಂಭಗೊಂಡ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ರಾಜ್ಯದಲ್ಲಿ 99-2000ನೇ ಸಾಲಿನಲ್ಲಿ 15938 ಘಟಕಗಳು ಹಾಗೂ ಪ್ರಸಕ್ತ ಸಾಲಿನಲ್ಲಿ 31-12-2000ದವರೆಗೆ 10850 ಸಣ್ಣ ಕೈಗಾರಿಕೆಗಳೂ ನೊಂದಾಣಿಯಾಗಿರುತ್ತವೆ.

(ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ನೀಡಿದೆ).

ಆ) ಧಾರವಾಡ ಜಿಲ್ಲೆಯಲ್ಲಿ ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷದಲ್ಲಿ ನೊಂದಣಿಯಾಗಿರುವ ತಾಲ್ಲೂಕುವಾರು ವಿವರ ಕೆಳಕಂಡಂತಿದೆ.